710 ಶ್ರೀ ಶ್ರೀನಿವಾಸ್ ಎಂ.: ಮಾನ್ಯ ತೋಟಗಾರಿಕೆ ಮತ್ತು ಬಂದೀಖಾನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ತೋಟಗಾರಿಕೆ ಇಲಾಖೆಯಲ್ಲಿ ತೋಟಗಾರಿಕಾ ಸಹಾಯಕರ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಕಳೆದ 15 ವರ್ಷಗಳಿಂದಲೂ ಈ ಹುದ್ದೆಗಳನ್ನು ತುಂಬದಿರಲು ಕಾರಣಗಳೇನು;

ಇ) ಈ ಹುದ್ದೆಗಳನ್ನು ತುಂಬಲು ಸರ್ಕಾರ ಕ್ರಮ ಕೈಗೊಳ್ಳುವುದೇ; ಯಾವಾಗ ಈ ಹುದ್ದೆಗಳನ್ನು ತುಂಬಲಾಗುವುದು?

ಶ್ರೀ ಉಮೇಶ್ ವಿ. ಕತ್ತಿ (ತೋಟಗಾರಿಕೆ ಮತ್ತು ಬಂದೀಖಾನೆ ಸಚಿವರು):

ಅ) ಬಂದಿದೆ.

ಆ) ಕಳೆದ 15 ವರ್ಷಗಳಿಂದ ತೋಟಗಾರಿಕೆ ಸಹಾಯಕರ ಹುದ್ದೆಗಳನ್ನು ತುಂಬದೆಯಿರುವುದನ್ನು ಮನಗಂಡು, 193 ಹುದ್ದೆಗಳನ್ನು ನೇರನೇಮಕಾತಿ ಮೂಲಕ ತುಂಬುವ ಸಲುವಾಗಿ ಕೆ.ಪಿ.ಎಸ್.ಸಿ.ಗೆ ಕೋರಿಕೆಯನ್ನು ದಿ: 6.9.2004ರಲ್ಲಿ ಸಲ್ಲಿಸಲಾಗಿರುತ್ತದೆ. ಕೆ.ಪಿ.ಎಸ್.ಸಿ.ಯು ಈ ಹುದ್ದೆಗಳನ್ನು ತುಂಬಲು ದಿನಾಂಕ: 26.12.2005ರಲ್ಲಿ ಅಧಿಸೂಚನೆಯನ್ನು ಹೊರಡಿಸಿರುತ್ತದೆ. ಈ ಅಧಿಸೂಚನೆಯನ್ನು ಪ್ರಶ್ನಿಸಿ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಅರ್ಜಿ ದಾಖಲಾಗಿದ್ದು, ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ಈ ಪ್ರಕರಣದಲ್ಲಿ ತಡೆಯಾಜ್ಞೆಯನ್ನು ನೀಡಿರುತ್ತದೆ.

ಇ) ಹೌದು. ಕೆ.ಎ.ಟಿ. ನೀಡಿರುವ ತಡೆಯಾಜ್ಞೆಯನ್ನು ತೆರವುಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ತಡೆಯಾಜ್ಞೆ ತೆರವುಗೊಂಡ ನಂತರ ನೇಮಕಾತಿಗೆ ಕ್ರಮ ಕೈಗೊಳ್ಳಲಾಗುವುದು.